ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : **952(1076)**
ಸದಸ್ಯರ ಹೆಸರು : ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 16.03.2020
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ.	ಕಾರವಾರ ಜಿಲ್ಲೆಯ ಹಳಿಯಾಳ ಪಟ್ಟಣದ ಶಿವಾಜಿ ಪ್ರೌಢಶಾಲೆಯಲ್ಲಿ ಕಳೆದ 22 ವರ್ಷಗಳಿಂದ ಅರೆಕಾಲಿಕ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಒಬ್ಬ ಶಿಕ್ಷಕನನ್ನು ಇಲ್ಲಿಯವರೆಗೆ ಖಾಯಂ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು).	"ಬಂದಿದೆ" ಶಿರಸಿ ಶೈಕ್ಷಣಿಕ ಜಿಲ್ಲೆ ವ್ಯಾಪ್ತಿಗೆ ಹಳಿಯಾಳದ ಶ್ರೀ ಶಿವಾಜಿ ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢಶಾಲಾ ವಿಭಾಗ)ದಲ್ಲಿ ಶ್ರೀ ರಮೇಶ ಪಿ ಹೆಗಡೆ ಇವರು ಸೇವೆ ಸಲ್ಲಿಸುತ್ತಿದ್ದಾರೆ. ಶ್ರೀ ರಮೇಶ ಪಿ. ಹೆಗಡೆ ಇವರು ಶ್ರೀ ಶಿವಾಜಿ ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢಶಾಲಾ ವಿಭಾಗ) ಹಳಿಯಾಳ ಇಲ್ಲಿ ದಿನಾಂಕ:02/06/1997 ರಿಂದ ಅರೆಕಾಲಿಕ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಸದರಿಯವರು 1996-97ನೇ ಸಾಲಿನಲ್ಲಿ ಅರೆಕಾಲಿಕ ಶಿಕ್ಷಕರಾಗಿ ನೇಮಕಾತಿ ಹೊಂದಿರುವುದಿಲ್ಲ. ಉಪ ನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ ಶಿರಸಿ ಶೈಕ್ಷಣಿಕ ಜಿಲ್ಲೆ ಇವರ ಪತ್ರ ದಿನಾಂಕ:14/05/2015ರ ಪ್ರಕಾರ ಸರ್ಕಾರಿ ಪ್ರೌಢಶಾಲೆಗಳಲ್ಲಿ ಅರೆಕಾಲಿಕ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವವರನ್ನು ನಾಗರೀಕ ಸೇವೆಗಳಲ್ಲಿ ವಿಲೀನಗೊಳಿಸುವ ಬಗ್ಗೆ ಪ್ರಸ್ತಾವನೆ ಸಲ್ಲಿಸಿದ್ದು, ಸದರಿ ಪ್ರಸ್ತಾವನೆಗೆ ಆಯುಕ್ತರ ಕಛೇರಿಯಿಂದ ಉಪ ನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ, ಶಿರಸಿ ಇವರಿಗೆ ಶ್ರೀ ರಮೇಶ ಹೆಗಡೆ ಇವರು ಅರೆಕಾಲಿಕ ಶಿಕ್ಷಕರ ವ್ಯಾಪ್ತಿಗೆ ಬಾರದೇ ಇರುವುದರಿಂದ ಕರ್ನಾಟಕ ನಾಗರೀಕ ಸೇವೆಗಳಲ್ಲಿ ವಿಲೀನಗೊಳಿಸಲು ಅವಕಾಶವಿರುವುದಿಲ್ಲವೆಂದು ತಿಳಿಸಲಾಗಿರುತ್ತದೆ.
ಆ.	2007ರಲ್ಲಿ ಅರೆಕಾಲಿಕ ಶಿಕ್ಷಕರನ್ನು ಖಾಯಂ ಮಾಡುವ ಸಂದರ್ಭದಲ್ಲಿ ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 16 ಎಸ್.ಎಲ್.ಬಿ 1996 ದಿನಾಂಕ:09/01/2016ರನ್ವಯ 2(i) (iv) ರಲ್ಲಿ 1996-97ನೇ ಸಾಲಿಗೆ ಕನಿಷ್ಟ ಒಂದು ವರ್ಷ ಸೇವೆ ಸಲ್ಲಿಸಿರಬೇಕು ಎಂಬ ನಿಯಮಾವಳಿಯನ್ನು ಪೂರೈಸದ ಕಾರಣ ಸೇವಾ ಸಕ್ರಮಾತಿಯಿಂದ ಸಂಬಂಧಿಸಿದವರ ಹೆಸರನ್ನು ಕೈಬಿಡಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	
ಇ.	ಬಂದಿದ್ದಲ್ಲಿ, ಮಾನವೀಯತೆ ದೃಷ್ಟಿಯಿಂದ ಇವರು ಮಾಡಿರುವ ಸೇವೆಯನ್ನ ಪರಿಗಣಿಸಿ ಖಾಯಂಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು)	ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ

ಸಂಖ್ಯೆ: ಇಪಿ 20 ಎಲ್‌ಬಿಪಿ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು